# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 04-03-2021 ಪ್ರಶ್ನೆ ಸಂಖ್ಯೆ : 529 (654)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 04-03-2021

ಉತ್ತರಿಸುವ ಸಚಿವರು: ಮಾನ್ಯ ಜಲಸಂಪನ್ಮೂಲ ಸಚಿವರು

ವಿಷಯ : ಬೆಳಗಾವಿ ಜಿಲ್ಲೆ ರಾಯಭಾಗ ತಾಲ್ಲೂಕಿನ ಹಳೇ ದಿಗ್ಗೇವಾಡಿ ಗ್ರಾಮದಲ್ಲಿ ಕೃಷ್ಣಾ ನದಿಯಿಂದ ಪ್ರತಿ ವರ್ಷ ಪ್ರವಾಹಕ್ಕೀಡಾಗುವ ಬಗ್ಗೆ

(ಅ) ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನ ಹಳೇ ದಿಗ್ಗೇವಾಡಿ ಗ್ರಾಮವು ಕೃಷ್ಣಾ ನದಿಗೆ ಅತಿ ಸಮೀಪದಲ್ಲಿದ್ದು, ಪ್ರತಿ ವರ್ಷ ಮಳೆಗಾಲದ ಸಂದರ್ಭದಲ್ಲಿ ಪ್ರವಾಹಕ್ಕೀಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಕಳೆದ ಮೂರು ವರ್ಷಗಳ ಅವಧಿಯಲ್ಲಿ ಈ ಪ್ರವಾಹದಿಂದ ಆದ ಆಸ್ತಿ-ಪಾಸ್ತಿಗಳ ಹಾನಿಯ ವಿವರ ಒದಗಿಸುವುದು;

(ಇ) ಪ್ರತಿ ವರ್ಷ ಪ್ರವಾಹ ಪರಿಸ್ಥಿತಿ ಎದುರಿಸುತ್ತಿರುವ ಈ ಗ್ರಾಮವನ್ನು ಶಾಶ್ವತವಾಗಿ ಸ್ಥಳಾಂತರಿಸುವ ಉದ್ದೇಶ ಸರ್ಕಾರಕ್ಕಿದೆಯೇ;

(ಈ) ಹಾಗಿದ್ದಲ್ಲಿ, ಈ ಯೋಜನೆಯ ರೂಪುರೇಷೆಗಳೇನು; ಹಾಗೂ ಯಾವ ಕಾಲಮಿತಿಯಲ್ಲಿ ಇದನ್ನು ಪೂರ್ಣಗೊಳಿಸಲಾಗುವುದು? (ಸಂಪೂರ್ಣ ವಿವರ ನೀಡುವುದು)